ಶುಕ್ರವಾರ,27.02.2026
ಬೆಂಗಳೂರು, ಬೆಲೆ: 5ರೂ.,2 ಪುಟಗಳು
ಸಂಪುಟ 01 – ಸಂಚಿಕೆ 155

Digital Varthe Kannada Daily
Volume 01 - Issue 155
Friday 27.02.2026
Price: 5/- Rs
2 Pages Bangalore

PRGI/RNI: KNKAN/25/A1348

# ಡಿಜಿಟಲ್ ವಾರ್ತೆ

ಕನ್ನಡ ದಿನಪತ್ರಿಕೆ
ಕನ್ನಡಿಗರ ಶಕ್ತಿ

DIGITAL VARTHE
digitalvarthe@gmail.com
www.digitalvarthe.com

## ನೇಣು ಬಿಗಿದು ಎಂಜಿನಿಯರಿಂಗ್ ಕಾಲೇಜಿನ ಉಪನ್ಯಾಸಕ ಸೂಸೈಡ್



**ಕೋಲಾರ:**ಎಂಜಿನಿಯರಿಂಗ್ ಕಾಲೇಜಿನ ಉಪನ್ಯಾಸಕರೊಬ್ಬರು ನೇಣು ಬಿಗಿದು ಆತ್ಮಹತ್ಯೆ ಮಾಡಿಕೊಂಡಿರುವ ದುಃಖದ ಘಟನೆ ಕೋಲಾರ ತಾಲ್ಲೂಕಿನ ಖಾದ್ರಿಪುರ ಗ್ರಾಮದಲ್ಲಿ ನಡೆದಿದೆ. ಈ ಘಟನೆ ಸ್ಥಳೀಯರಲ್ಲಿ ಆತಂಕ ಮತ್ತು ಬೇಸರವನ್ನುಂಟು ಮಾಡಿದೆ.

ಮೊನೀಶ್ (36) ಆತ್ಮಹತ್ಯೆಗೆ ಶರಣಾದ ಉಪನ್ಯಾಸಕರಾಗಿದ್ದು, ಅವರು ಕೋಲಾರದಲ್ಲಿರುವ ಖಾಸಗಿ ಎಂಜಿನಿಯರಿಂಗ್ ಕಾಲೇಜೊಂದರಲ್ಲಿ ಉಪನ್ಯಾಸಕರಾಗಿ ಕಾರ್ಯನಿರ್ವಹಿಸುತ್ತಿದ್ದರು ಎಂದು ತಿಳಿದುಬಂದಿದೆ. ವೃತ್ತಿಯಲ್ಲಿ ಪ್ರತಿಭಾವಂತರಾಗಿದ್ದ ಅವರು ವಿದ್ಯಾರ್ಥಿಗಳೊಂದಿಗೆ ಸ್ನೇಹಪರವಾಗಿ ನಡೆದುಕೊಳ್ಳುತ್ತಿದ್ದರೆಂದು ಪರಿಚಿತರು ತಿಳಿಸಿದ್ದಾರೆ. ಅವರ ಅಕಾಲಿಕ ನಿಧನ ಕುಟುಂಬಸ್ಥರು, ಸಹೋದ್ಯೋಗಿಗಳು ಹಾಗೂ ವಿದ್ಯಾರ್ಥಿಗಳಲ್ಲಿ ಆಘಾತವನ್ನುಂಟು ಮಾಡಿದೆ.

ಘಟನೆ ಸಂಭವಿಸಿದ ವೇಳೆ ಪತ್ನಿ ವೇದವತಿ ಅವರು ಕೆಲಸದ ನಿಮಿತ್ತ ಮನೆಯಿಂದ ಹೊರಗಿದ್ದರೆಂದು ಹೇಳಲಾಗಿದ್ದು, ಈ ಸಂದರ್ಭದಲ್ಲೇ ಮೊನೀಶ್ ಮನೆಯಲ್ಲಿ ಯಾರೂ ಇಲ್ಲದ ಸಮಯವನ್ನು ಬಳಸಿಕೊಂಡು ನೇಣು ಬಿಗಿದು ಆತ್ಮಹತ್ಯೆ ಮಾಡಿಕೊಂಡಿದ್ದಾರೆ ಎಂಬ ಮಾಹಿತಿ ಲಭ್ಯವಾಗಿದೆ. ಮನೆಗೆ ಮರಳಿದ ಪತ್ನಿ ಬಾಗಿಲು ತೆರೆಯದೆ ಇರುವುದನ್ನು ಗಮನಿಸಿ ಅನುಮಾನಗೊಂಡು ಲಎಂದು ತಿಳಿದುಬಂದಿದೆ. ತಕ್ಷಣವೇ ಸ್ಥಳೀಯರಿಗೆ ಮಾಹಿತಿ ನೀಡಲಾಗಿದ್ದು, ಬಳಿಕ ಪೊಲೀಸರಿಗೆ ದೂರು ಸಲ್ಲಿಸಲಾಗಿದೆ.

ಸುದ್ದಿ ತಿಳಿದ ಕೋಲಾರ ಗ್ರಾಮಾಂತರ ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಮೃತದೇಹವನ್ನು ಮರಣೋತ್ತರ ಪರೀಕ್ಷೆಗಾಗಿ ಜಿಲ್ಲಾಸ್ಪತ್ರೆಗೆ ರವಾನಿಸಲಾಗಿದೆ. ಪ್ರಾಥಮಿಕವಾಗಿ ಆತ್ಮಹತ್ಯೆ ಎಂದು ಶಂಕಿಸಲಾಗುತ್ತಿದ್ದರೂ, ನಿಖರ ಕಾರಣವೇನು ಎಂಬುದನ್ನು ಪತ್ತೆಹಚ್ಚಲು ಪೊಲೀಸರು ಕುಟುಂಬಸ್ಥರು ಮತ್ತು ಆಪ್ತರಿಂದ ಮಾಹಿತಿ ಸಂಗ್ರಹಿಸುತ್ತಿದ್ದಾರೆ.

ಉಪನ್ಯಾಸಕರ ಆತ್ಮಹತ್ಯೆಗೆ ವೈಯಕ್ತಿಕ ಸಮಸ್ಯೆಗಳೇ ಕಾರಣವೇ ಅಥವಾ ಬೇರೆ ಯಾವುದೇ ಒತ್ತಡವಿದೆಯೇ ಎಂಬ ದಿಕ್ಕಿನಲ್ಲಿ ತನಿಖೆ ಮುಂದುವರಿದಿದೆ. ಈ ಸಂಬಂಧ ಕೋಲಾರ ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಪೊಲೀಸರು ಮುಂದಿನ ಕಾನೂನು ಕ್ರಮಗಳನ್ನು ಕೈಗೊಂಡಿದ್ದಾರೆ.

## ಗೊಂದಲಗಳ ಮಧ್ಯೆಯೂ ದಲಿತರ ಒಳ ಮೀಸಲಾತಿ
## ವಿಧೇಯಕಕ್ಕೆ ರಾಜ್ಯಪಾಲರಿಂದ ಅಂಗೀಕಾರ



**ಬೆಂಗಳೂರು:** ಹಲವು ದಿನಗಳಿಂದ ಬಾಕಿ ಉಳಿಸಿಕೊಂಡಿದ್ದ ಪರಿಶಿಷ್ಟ ಜಾತಿಗಳ (ಉಪ ವರ್ಗೀಕರಣ) ವಿಧೇಯಕಕ್ಕೆ–2025 ಕೊನೆಗೂ ರಾಜ್ಯಪಾಲರು ಅಂಗೀಕರಿಸಿದ್ದಾರೆ. ಕೆಲವು ಗೊಂದಲಗಳ ಮಧ್ಯೆಯೂ ರಾಜ್ಯಪಾಲ ಥಾವರ್ ಚೆಂದ್ ಗೆಹ್ಲೋಟ್ ಪರಿಶಿಷ್ಟ ಜಾತಿಗಳ (ಉಪ ವರ್ಗೀಕರಣ) ವಿಧೇಯಕಕ್ಕೆ ಸಹಿ ಹಾಕಿದ್ದಾರೆ. ಮೀಸಲಾತಿ ವಿಚಾರದಲ್ಲಿ ಒಳ ಪಂಗಡಗಳ ನಡುವೆ ಗೊಂದಲ ಏರ್ಪಟ್ಟಿದ್ದರಿಂದ ವಿಧೇಯಕಕ್ಕೆ ಸಹಿ ಹಾಕದೆ ಪೆಂಡಿಂಗ್ ಇಟ್ಟಿದ್ದರು. ಆದ್ರೆ, ದಲಿತ ಸಮುದಾಯದ ಸಚಿವರು ರಾಜ್ಯಪಾಲರನ್ನು ಭೇಟಿ ಮಾಡಿ, ಧಾರವಾಡದಲ್ಲಿ ಉದ್ಯೋಗಾಕಾಂಕ್ಷಿಗಳ ಪ್ರತಿಭಟನೆ ಬಗ್ಗೆ ಪ್ರಸ್ತಾಪಿಸಿ ವಿಧೇಯಕಕ್ಕೆ ಸಹಿ ಹಾಕುವಂತೆ ಮನವಿ ಮಾಡಿದ್ದಾರೆ. ಇದರ ಬೆನ್ನಲ್ಲೇ ರಾಜ್ಯಪಾಲರು ಪರಿಶಿಷ್ಟ ಜಾತಿಗಳ ಮೀಸಲಾತಿ ವಿಧೇಯಕಕ್ಕೆ ಅನುಮೋದನೆ ನೀಡಿದ್ದಾರೆ.

ಒಳಮೀಸಲಾತಿ ವಿಧೇಯಕವನ್ನ ವಾಪಸ್ ಕಳುಹಿಸಿದ ರಾಜ್ಯಪಾಲರು

ಕರ್ನಾಟಕ ಅನುಸೂಚಿತ ಜಾತಿಗಳ ಉಪವರ್ಗೀಕರಣ ವಿಧೇಯಕಕ್ಕೆ ರಾಜ್ಯಪಾಲ ಥಾವರ್ ಚಂದ್ ಗೆಹಲೋತ್ ಅವರು ಅಂಕಿತ ಹಾಕಲು ನಿರಾಕರಿಸಿದ್ದು, ಹಲವು ಸ್ಪಷ್ಟನೆಗಳನ್ನು ಕೋರಿ ವಿಧೇಯಕವನ್ನು ಸರ್ಕಾರಕ್ಕೆ ವಾಪಸ್ ಕಳುಹಿಸಿದ್ದರು. ಇದರಿಂದಾಗಿ ರಾಜ್ಯ ಸರ್ಕಾರದ ಒಳಮೀಸಲಾತಿ ಜಾರಿಯ ಆಶಯಕ್ಕೆ ತಾತ್ಕಾಲಿಕ ಧಕ್ಕೆ ಉಂಟಾಗಿತ್ತು. ನ್ಯಾಯಮೂರ್ತಿ ನಾಗಮೋಹನ್ ದಾಸ್ ಆಯೋಗದ ಶಿಫಾರಸ್ಸಿನಂತೆ ಶೇ. 6, 6 ಮತ್ತು 5ರ ಅನುಪಾತದಲ್ಲಿ ಕೋಟಾ ನಿಗದಿಪಡಿಸಲಾಗಿತ್ತು, ಆದರೆ ರಾಜ್ಯಪಾಲರು ಜನವರಿ 9 ರಂದೇ ಈ ಫೈಲ್ ವಾಪಸ್ ಕಳುಹಿಸಿದ್ದರು.

## ಶನಿಮಹಾತ್ಮಸ್ವಾಮಿ ಸ್ವಾಮಿ ಬ್ರಹ್ಮರಥೋತ್ಸವ



**ದೊಡ್ಡಬಳ್ಳಾಪುರ:**ಮಧುರೆ ಶನಿಮಹಾತ್ಮ ಸ್ವಾಮಿ 71ನೇ ಬ್ರಹ್ಮರಥೋತ್ಸವಸಂಪನ್ನ.. ಬ್ರಹ್ಮರಥೋತ್ಸವದಲ್ಲಿ ಬಾಗಿಯಾದ ಸಾವಿರಾರು ಭಕ್ತಾದಿಗಳು..

ಬೆಂಗಳೂರು ಗ್ರಾಮಾಂತರ ದೊಡ್ಡಬಳ್ಳಾಪುರ ತಾಲ್ಲೂಕಿನ ಇತಿಹಾಸ ಪ್ರಸಿದ್ಧ ಚಿಕ್ಕ ಮಧುರೆ ಶ್ರೀ ಶನಿಮಹಾತ್ಮಸ್ವಾಮಿಯ 71ನೇ ಬ್ರಹ್ಮರಥೋತ್ಸವವು ಶ್ರದ್ಧಾಭಕ್ತಿಯಿಂದ, ವಿಜೃಂಭಣೆಯಿಂದ ನೆರವೇರಿಸಲಾಗಿದೆ .ಪ್ರತಿವರ್ಷದಂತೆ ಈ ವರ್ಷವು ಸಹ ಬ್ರಹ್ಮರಥೋತ್ಸವನ್ನು ಅದ್ದೂರಿಯಾಗಿ ನೆರವೇರಿಸಲು ಸಕಲ ಸಿದ್ಧತೆ ನಡೆಸಿಕೊಳ್ಳಲಾಗಿತ್ತು. ಇಂದು ಮುಂಜಾನೆಯಿಂದಲೇ ದೇವರಿಗೆ ವಿಶೇಷ ಪೂಜೆ ಪುನಸ್ಕಾರಗಳನ್ನು ನೆರವೇರಿಸಲಾಗಿತ್ತು.. ಭಕ್ತಾಧಿಗಳು ಸಾಗರೋಪಾದಿಯಲ್ಲಿ ಬಂದು ದೇವರ ದರ್ಶನ ಪಡೆಯಲಾಗಿದೆ.. ಇಂದು ಮಧ್ಯಾಹ್ನ ಸುಮಾರು 2 ಗಂಟೆಗೆ ಸಲ್ಲುವ ಶುಭಲಗ್ನದಲ್ಲಿ 71ನೇ ಬ್ರಹ್ಮರಥೋತ್ಸವ ನೆರವೇರಿದ್ದು, ಬಕ್ತಾದಿ ಗಳು ತೇರು ಎಳೆದು ತೆರಿಗೆ ಬಾಳೆಹಣ್ಣು ಎಸೆದು ತಮ್ಮ ಇಷ್ಟಾರ್ಥ ಸಿದ್ದಿಗೆ ಪ್ರಾರ್ಥನೆ ಮಾಡುವ ಮೂಲಕ ಸ್ವಾಮಿ ಅನುಗ್ರಹಕ್ಕೆ ಪಾತ್ರರಾದರೂ... ಇನ್ನು ಬ್ರಹ್ಮರಥೋತ್ಸವದಲ್ಲಿ ಬಾಗಿಯಾಗಿದ್ದ ಸಾವಿರಾರು ಭಕ್ತಾಧಿಗಳಿಗೆ ಅನ್ನದಾಸೋಹ ವ್ಯವಸ್ಥೆ ಮಾಡಲಾಗಿತ್ತು, ಸೂಕ್ತ ಪೊಲೀಸ್ ಬಂದೋಬಸ್ತ್, ಸಾರಿಗೆ ವ್ಯವಸ್ಥೆ ಸೇರಿದಂತೆ ಇತರೆ ಸೌಕರ್ಯಗಳನ್ನು ಮಾಡಿ ಬ್ರಹ್ಮರಥೋತ್ಸವವು ಸುಸುತ್ರವಾಗಿ ನೆರವೇರಿದೆ..

## ಗ್ರಾಮದ ದೇವಮ್ಮನ ದೇವಾಲಯ ಅಭಿವೃದ್ಧಿ
## ನಂಜುಂಡಸ್ವಾಮಿ ಅವರಿಂದ ದೇಣಿಗೆ



**ಕೃಷ್ಣರಾಜಪೇಟೆ:** ತಾಲೂಕಿನ ಹೊಸಹೊಳಲು ಗ್ರಾಮದಲ್ಲಿರುವ ಪುರಾತನ ದೇವಮ್ಮನ ದೇವಾಲಯದ ಪುನರ್ ನಿರ್ಮಾಣ ಹಾಗೂ ಅಭಿವೃದ್ಧಿ ಕಾರ್ಯಕ್ಕೆ ಸಮಾಜ ಸೇವಕ ನಂಜುಂಡಸ್ವಾಮಿ ಅವರು ದೇಣಿಗೆ ನೀಡುವ ಮೂಲಕ ಸಾಮಾಜಿಕ ಕಳಕಳಿ ಮೆರೆದಿದ್ದಾರೆ,

ಸುಮಾರು 50 ವರ್ಷಗಳಿಂದ ಅಭಿವೃದ್ಧಿ ಕಾಣದೆ ಶಿಥಿಲಾವಸ್ಥೆಯಲ್ಲಿದ್ದ ದೇವಾಲಯದ ಸ್ಥಿತಿಯನ್ನು ಗ್ರಾಮಸ್ಥರು ಸಮಾಜ ಸೇವಕ ನಂಜುಂಡಸ್ವಾಮಿ ಅವರ ಗಮನಕ್ಕೆ ತಂದ ತಕ್ಷಣ ಸ್ಪಂದಿಸಿದ ಅವರು ದೇವಾಲಯದ ಅಭಿವೃದ್ಧಿಗೆ ಕೈಜೋಡಿಸಿದ್ದಾರೆ,

ಸಮಾಜ ಸೇವಕ ನಂಜುಂಡಸ್ವಾಮಿ ಅವರ ಈ ನಿಸ್ವಾರ್ಥ ಸೇವೆಯನ್ನು ಗ್ರಾಮಸ್ಥರು ಮುಕ್ತಕಂಠದಿಂದ ಶ್ಲಾಘಿಸಿದ್ದಾರೆ. ಅವರ ಕೊಡುಗೆಯಿಂದಾಗಿ ಇಂದು ದೇವಾಲಯವು ಸುಂದರವಾಗಿ ನಿರ್ಮಾಣಗೊಂಡಿದೆ ಎಂದು ಗ್ರಾಮದ ಮುಖಂಡರು ಹರ್ಷ ವ್ಯಕ್ತಪಡಿಸಿದರು,

ದೇವಾಲಯದ ಲೋಕಾರ್ಪಣೆ ಸಂದರ್ಭದಲ್ಲಿ ವಿಶೇಷ ಪೂಜೆ ಹಾಗೂ ಸಿಹಿ ವಿತರಣೆ ಮಾಡಿ, ನಂಜುಂಡಸ್ವಾಮಿ ಅವರಿಗೆ ದೇವಮ್ಮ ತಾಯಿಯ ಆಶೀರ್ವಾದ ಸದಾ ಇರಲಿ ಮತ್ತು ಅವರಿಗೆ ಇನ್ನಷ್ಟು ಸಮಾಜ ಸೇವೆ ಮಾಡುವ ಶಕ್ತಿಯನ್ನು ಭಗವಂತ ನೀಡಲಿ ಎಂದು ಗ್ರಾಮಸ್ಥರು ಹಾರೈಸಿದರು

## ಹಿರಿಯ ಮುಖಂಡ ತಣಸಿ ಜವರೇಗೌಡ ನಿಧನ



**ಕೃಷ್ಣರಾಜಪೇಟೆ:**ತಾಲೂಕಿನ ಚಟ್ಟೇನಹಳ್ಳಿ ಗ್ರಾಮದ ನಿವಾಸಿ ಹಿರಿಯ ಮುಖಂಡರಾದ ತಣಸಿ ಜವರೇಗೌಡ (75) ಅವರು ಗುರುವಾರ ಅನಾರೋಗ್ಯದಿಂದ ನಿಧನರಾದರು,

ಕಳೆದ ಕೆಲವು ದಿನಗಳಿಂದ ಅನಾರೋಗ್ಯದಿಂದ ಬಳಲುತ್ತಿದ್ದ ಅವರು ಇಂದು ಇಹಲೋಕ ತ್ಯಜಿಸಿದ್ದಾರೆ,

ಮೃತರು ಇಟ್ಟಿಗೆ ಫ್ಯಾಕ್ಟರಿ ಮಾಲೀಕರು ಹಾಗೂ ಜೆಡಿಎಸ್ ಮುಖಂಡರಾದ ಚಟ್ಟೇನಹಳ್ಳಿ ಬೋರೇಗೌಡ ಸೇರಿದಂತೆ ಇಬ್ಬರು ಪುತ್ರರು, ಪತ್ನಿ ಮತ್ತು ಇಬ್ಬರು ಪುತ್ರಿಯರು ಸೇರಿದಂತೆ ಅಪಾರ ಬಂಧು–ಬಳಗವನ್ನು ಬಿಟ್ಟು ಅಗಲಿದ್ದಾರೆ,

ಜವರೇಗೌಡರ ನಿಧನಕ್ಕೆ ಹಾಲಿ–ಮಾಜಿ ಶಾಸಕರು, ಸಚಿವರು, ಸಮಾಜ ಸೇವಕರು, ಸ್ಥಳೀಯ ಜನಪ್ರತಿನಿಧಿಗಳು, ಜೆಡಿಎಸ್ ಪಕ್ಷದ ಮುಖಂಡರು ಹಾಗೂ ಚಟ್ಟೇನಹಳ್ಳಿ ಗ್ರಾಮಸ್ಥರು ತೀವ್ರ ಸಂತಾಪ ಸೂಚಿಸಿ ಮೃತರ ಆತ್ಮಕ್ಕೆ ಶಾಂತಿ ಸಿಗಲಿ ಮತ್ತು ಅವರ ಕುಟುಂಬಕ್ಕೆ ಈ ನೋವನ್ನು ಭರಿಸುವ ಶಕ್ತಿಯನ್ನು ಭಗವಂತ ನೀಡಲಿ ಎಂದು ಪ್ರಾರ್ಥಿಸಿದ್ದಾರೆ,

ಮೃತರ ಅಂತಿಮ ವಿಧಿವಿಧಾನಗಳು ಹಾಗೂ ಅಂತ್ಯಕ್ರಿಯೆಯು ನಾಳೆ ಶುಕ್ರವಾರ ಮಧ್ಯಾಹ್ನ 11:30 ಗಂಟೆಗೆ ಚಟ್ಟೇನಹಳ್ಳಿ ಗ್ರಾಮದಲ್ಲಿರುವ ಅವರ ಸ್ವಂತ ತೋಟದಲ್ಲಿ ಜರುಗಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ,

## ಇನ್ನೂ ಜೀತಪದ್ಧತಿ ಜೀವಂತ: 18 ಕಾರ್ಮಿಕರ ರಕ್ಷಣೆ



**ಹಾಸನ:** ಸಮಾಜ ಆಧುನಿಕತೆ ಮತ್ತು ಅಭಿವೃದ್ಧಿಯತ್ತ ಸಾಗುತ್ತಿದ್ದರೂ, ಕೆಲವೆಡೆ ಇನ್ನೂ ಜಾತಿ ಆಧಾರಿತ ಭೇದಭಾವ, ಮೌಢ್ಯ ಹಾಗೂ ಜೀತಪದ್ಧತಿ ಎಂಬ ಸಾಮಾಜಿಕ ನಾಚಿಕೆಗೇಡಿನ ಘಟನೆಗಳು ನಡೆಯುತ್ತಿರುವುದು ಆತಂಕಕಾರಿಯಾಗಿದೆ. ಇಂತಹವೇ ಒಂದು ಬೆಚ್ಚಿಬೀಳಿಸುವ ಜೀತಪದ್ಧತಿ (ಬಾಂಡೆಡ್ ಲೇಬರ್) ಪ್ರಕರಣ ಹಾಸನ ಜಿಲ್ಲೆಯ ಬೇಲೂರು ತಾಲೂಕಿನ ಜುಟ್ಟನಹಳ್ಳಿ ಗ್ರಾಮದಲ್ಲಿ ಬೆಳಕಿಗೆ ಬಂದಿದೆ.

ಜುಟ್ಟನಹಳ್ಳಿ ಗ್ರಾಮದಲ್ಲಿ ಕಾರ್ಮಿಕರನ್ನು ಜೀತಕ್ಕೆ ಒಳಪಡಿಸಿ ಅಮಾನವೀಯವಾಗಿ ದುಡಿಸಿಕೊಳ್ಳಲಾಗುತ್ತಿದೆ ಎಂಬ ಖಚಿತ ಮಾಹಿತಿ ದೊರಕಿದ ಹಿನ್ನೆಲೆ, ಪೊಲೀಸರು ಮತ್ತು ಕಂದಾಯ ಇಲಾಖೆಯ ಅಧಿಕಾರಿಗಳು ಸಂಯುಕ್ತವಾಗಿ ದಾಳಿ ನಡೆಸಿದರು. ಯೋಜಿತ ರೀತಿಯಲ್ಲಿ ನಡೆದ ಈ ಕಾರ್ಯಾಚರಣೆಯಲ್ಲಿ ಒಟ್ಟು 18 ಮಂದಿ ಕಾರ್ಮಿಕರನ್ನು ರಕ್ಷಿಸಿ ಜೀತದಿಂದ ಮುಕ್ತಗೊಳಿಸಲಾಗಿದೆ. ಈ ಕಾರ್ಯಾಚರಣೆ ಸ್ಥಳೀಯರಲ್ಲಿ ಚರ್ಚೆಗೆ ಗ್ರಾಸವಾಗಿದ್ದು, ಜೀತಪದ್ಧತಿಯ ಭೀಕರತೆಯನ್ನು ಮತ್ತೊಮ್ಮೆ ಹೊರಹಾಕಿದೆ.

ಪ್ರಾಥಮಿಕ ತನಿಖೆಯ ಪ್ರಕಾರ ನಾಗರಾಜ್ ಹಾಗೂ ಮೋಹನೇಶ್ ಎಂಬವರು ಈ ಕಾರ್ಮಿಕರನ್ನು ಅಕ್ರಮವಾಗಿ ಬಂಧಿಸಿ ಒಂದೇ ಶೆಡ್‌ನಲ್ಲಿ ಇರಿಸಿಕೊಂಡು ಯಾವುದೇ ಸಂಬಳ ನೀಡದೆ ದುಡಿಸಿಕೊಳ್ಳುತ್ತಿದ್ದರು ಎಂಬ ಗಂಭೀರ ಆರೋಪ ಕೇಳಿಬಂದಿದೆ. ಕಾರ್ಮಿಕರಿಗೆ ಸರಿಯಾದ ವಾಸಸ್ಥಳ, ಶುದ್ಧ ಕುಡಿಯುವ ನೀರು, ಆರೋಗ್ಯ ಸೇವೆಗಳು ಸೇರಿದಂತೆ ಮೂಲಭೂತ ಸೌಲಭ್ಯಗಳನ್ನೇ ನೀಡದೇ, ಅತ್ಯಂತ ಕಷ್ಟಕರ ಹಾಗೂ ಅಮಾನವೀಯ ಪರಿಸ್ಥಿತಿಯಲ್ಲಿ ಕೆಲಸ ಮಾಡಿಸಲು ಒತ್ತಾಯಿಸಲಾಗುತ್ತಿತ್ತು ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ರಕ್ಷಿಸಲಾದ ಕಾರ್ಮಿಕರಲ್ಲಿ ಕೇರಳ, ಒಡಿಶಾ, ಜಾರ್ಖಂಡ್, ಉತ್ತರ ಪ್ರದೇಶ ಸೇರಿದಂತೆ ವಿವಿಧ ರಾಜ್ಯಗಳಿಂದ ಬಂದವರು ಸೇರಿದ್ದಾರೆ. ಜೊತೆಗೆ ಕರ್ನಾಟಕದ ಹಾವೇರಿ, ವಿಜಯಪುರ, ಗದಗ ಹಾಗೂ ಕಾಸರಗೋಡು ಭಾಗಗಳಿಂದ ಬಂದ ಕಾರ್ಮಿಕರೂ ಜೀತಪದ್ಧತಿಗೆ ಒಳಗಾಗಿದ್ದರೆಂದು ತಿಳಿದುಬಂದಿದೆ. ಉದ್ಯೋಗದ ಆಮಿಷ ನೀಡಿ ರೈಲು ನಿಲ್ದಾಣಗಳ ಬಳಿ ಸಂಪರ್ಕ ಸಾಧಿಸಿ, ಉತ್ತಮ ಲವೇತನ ಮತ್ತು ಕೆಲಸದ ಭರವಸೆ ನೀಡುವ ಮೂಲಕ ಅವರನ್ನು ಕರೆತಂದು ಬಳಿಕ ಜೀತಕ್ಕೆ ಒಳಪಡಿಸಲಾಗುತ್ತಿತ್ತು ಎಂಬ ಸಂಗತಿ ತನಿಖೆಯಲ್ಲಿ ಬಹಿರಂಗವಾಗಿದೆ.

ಹಾಸನ ಜಿಲ್ಲೆಯ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ತಮ್ಮಯ್ಯ ಅವರ ನೇತೃತ್ವದಲ್ಲಿ ರಾತ್ರೋರಾತ್ರಿ ಈ ದಾಳಿ ಕಾರ್ಯಾಚರಣೆ ನಡೆಯಿತು. ಪೊಲೀಸರು ಶೆಡ್ ಮೇಲೆ ದಾಳಿ ನಡೆಸಿ ಕಾರ್ಮಿಕರನ್ನು ಸುರಕ್ಷಿತವಾಗಿ ಹೊರತೆಗೆದು ಅಕ್ರಮ ಬಂಧನದಿಂದ ಬಿಡುಗಡೆ ಗೊಳಿಸಿದರು. ರಕ್ಷಿಸಲಾದ ಎಲ್ಲ ಕಾರ್ಮಿಕರನ್ನು ತಕ್ಷಣವೇ ಹಾಸನ ನಗರದ ಅಂಬೇಡ್ಕರ್ ಭವನಕ್ಕೆ ಕರೆದೊಯ್ದು ತಾತ್ಕಾಲಿಕ ಆಶ್ರಯ, ಆಹಾರ ಹಾಗೂ ಅಗತ್ಯ ನೆರವು ಒದಗಿಸಲಾಗಿದೆ.

ಈ ಘಟನೆ ಜೀತಪದ್ಧತಿ ನಿರ್ಮೂಲನೆಗಾಗಿ ಸರ್ಕಾರ ಕಟ್ಟುನಿಟ್ಟಿನ ಕಾನೂನು ಕ್ರಮಗಳನ್ನು ಜಾರಿಗೊಳಿಸಿದ್ದರೂ, ಕೆಲವೆಡೆ ಅಕ್ರಮವಾಗಿ ಇಂತಹ ಪದ್ಧತಿ ಮುಂದುವರಿದಿರುವುದನ್ನು ಸ್ಪಷ್ಟಪಡಿಸಿದೆ. ಜೀತಪದ್ಧತಿ ನಿರ್ಮೂಲನೆ ಕಾಯ್ದೆಯಡಿ ಆರೋಪಿಗಳ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುತ್ತಿದ್ದು, ನಾಗರಾಜ್ ಮತ್ತು ಮೋಹನೇಶ್ ವಿರುದ್ಧ ಪ್ರಕರಣ ದಾಖಲಿಸಿ ತನಿಖೆ ಮುಂದುವರಿದಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಇದರ ಜೊತೆಗೆ ಜೀತದಿಂದ ಮುಕ್ತಗೊಳಿಸಲಾದ 18 ಮಂದಿ ಕಾರ್ಮಿಕರಿಗೆ ಸರ್ಕಾರದ ಮಾರ್ಗಸೂಚಿಗಳ ಪ್ರಕಾರ ಪುನರ್ವಸತಿ, ಪರಿಹಾರ ಹಾಗೂ ಉದ್ಯೋಗ ಸಹಾಯ ಒದಗಿಸಲು ಕ್ರಮ ಕೈಗೊಳ್ಳಲಾಗುತ್ತಿದೆ. ಅಧಿಕಾರಿಗಳು ಮುಂದಿನ ದಿನಗಳಲ್ಲಿ ಇಂತಹ ಅಕ್ರಮ ಚಟುವಟಿಕೆಗಳನ್ನು ತಡೆಗಟ್ಟಲು ವ್ಯಾಪಕ ಪರಿಶೀಲನೆ ಹಾಗೂ ಜಾಗೃತಿ ಕಾರ್ಯಕ್ರಮಗಳನ್ನು ನಡೆಸುವ ಅಗತ್ಯವಿದೆ ಎಂದು ತಿಳಿಸಿದ್ದಾರೆ.

## ಕೋಟ್ಯಂತರ ರೂ ನಷ್ಟದಲ್ಲಿ ಹುಬ್ಬಳ್ಳಿ ಹೆಸ್ಕಾಂ




**ಹುಬ್ಬಳ್ಳಿ:** ಜನರಿಂದ ತಪ್ಪದೇ ವಿದ್ಯುತ್ ಬಿಲ್ ವಸೂಲಿ ಮಾಡುವ ಹೆಸ್ಕಾಂ, ಅದಕ್ಕೆ ಸರಿಯಾಗಿ ಸೇವೆಯನ್ನು ಮಾತ್ರ ನೀಡುತ್ತಿಲ್ಲ. ಇದೀಗ ಹೆಸ್ಕಾಂ ಮತ್ತೆ ಆರ್ಥಿಕ ಸಂಕಷ್ಟಕ್ಕೆ ಸಿಲುಕಿದೆ. ಕಳೆದ ವರ್ಷ ಆದಾಯಕ್ಕಿಂತ ವೆಚ್ಚ ಹೆಚ್ಚಾಗಿದ್ದು, ಅದನ್ನು ಸರಿದೂಗಿಸಲು ಅವಕಾಶ ನೀಡುವಂತೆ ಕರ್ನಾಟಕ ವಿದ್ಯುಚ್ಛಕ್ತಿ ನಿಯಂತ್ರಣಾ ಆಯೋಗಕ್ಕೆ ಮನವಿ ಮಾಡಿದೆ. ಈ ಹಿನ್ನೆಲೆಯಲ್ಲಿ ಇಂದು ಹುಬ್ಬಳ್ಳಿಯಲ್ಲಿ ನಡೆದ ಸಾರ್ವಜನಿಕರ ಸಭೆಯಲ್ಲಿ ಹೆಸ್ಕಾಂ ವಿರುದ್ಧ ಆಯೋಗದ ಮುಂದೆ ಸಾರ್ವಜನಿಕರು ಆಕ್ರೋಶ ವ್ಯಕ್ತಪಡಿಸಿದರು. ಯಾವುದೇ ಕಾರಣಕ್ಕೂ ಜನರ ಮೇಲೆ ನಷ್ಟದ ಹೊರೆಯನ್ನು ಹಾಕಬಾರದು ಅಂತ ಆಗ್ರಹಿಸಿದರು.

**ಆರ್ಥಿಕ ನಷ್ಟದಲ್ಲಿ ಹುಬ್ಬಳ್ಳಿಯಲ್ಲಿರುವ ಹೆಸ್ಕಾಂ:**ಹುಬ್ಬಳ್ಳಿ ನಗರದಲ್ಲಿ ಕೇಂದ್ರ ಕಚೇರಿಯನ್ನು ಹೊಂದಿರುವ ಹುಬ್ಬಳ್ಳಿ ವಿದ್ಯುತ್ ಸರಬರಾಜು ಕಂಪನಿ, ಧಾರವಾಡ, ಹಾವೇರಿ, ಬಾಗಲಕೋಟೆ, ವಿಜಯಪುರ, ಬೆಳಗಾವಿ, ಉತ್ತರ ಕನ್ನಡ ಜಿಲ್ಲೆಯ ವ್ಯಾಪ್ತಿಯನ್ನು ಹೊಂದಿದೆ. ಏಳು ಜಿಲ್ಲೆಯ ಜನರು, ಕೈಗಾರಿಕೆಗಳು, ಐಪಿ ಸೆಟ್‌ಗಳಿಗೆ ವಿದ್ಯುತ್ ಸರಬರಾಜು ಮಾಡುವ ಕಂಪನಿ, ವಿದ್ಯುತ್ ನೀಡಿದ್ದಕ್ಕೆ ಪ್ರತಿಯಾಗಿ ಬಿಲ್‌ನ್ನು ವಸೂಲಿ ಮಾಡುತ್ತದೆ. ಆದರೂ ಕೂಡ ಸಂಸ್ಥೆಗೆ 2024–25ರ ಸಾಲಿನಲ್ಲಿ 188 ಕೋಟಿ ರೂ ಆದಾಯ ಕೊರತೆಯಾಗಿದೆಯಂತೆ. ಈ ಹಿಂದೆ ಅದನ್ನು 604 ಕೋಟಿ ರೂ ಆದಾಯ ಕೊರತೆ ಅಂತ ಹೇಳಿದ್ದ ಹೆಸ್ಕಾಂ, ಅದರಲ್ಲಿ ಕೆಲವನ್ನು ತಗೆದು 188 ಕೋಟಿ ರೂಪಾಯಿಗೆ ತಂದು ನಿಲ್ಲಿಸಿದೆ.

ಆರ್ಥಿಕ ನಷ್ಟವನ್ನು ಸರಿದೂಗಿಸಲು ಅವಕಾಶ ನೀಡಬೇಕು ಅಂತ ಹೆಸ್ಕಾಂ, ಕೆಲ ದಿನಗಳ ಹಿಂದೆ ಕರ್ನಾಟಕ ವಿದ್ಯುಚ್ಛಕ್ತಿ ನಿಯಂತ್ರಣಾ ಆಯೋಗಕ್ಕೆ ಮನವಿ ಸಲ್ಲಿಸಿತ್ತು. ಈ ಹಿನ್ನೆಲೆಯಲ್ಲಿ ಇಂದು ಹುಬ್ಬಳ್ಳಿಯಲ್ಲಿರುವ ಹೆಸ್ಕಾಂ ಕಚೇರಿಯಲ್ಲಿ ಸಾರ್ವಜನಿಕ ಸಭೆಯನ್ನು ನಡೆಸಿದ ಆಯೋಗದ ಅಧ್ಯಕ್ಷ ಪಿ ರವಿಕುಮಾರ್, ಜನರ ಅಭಿಪ್ರಾಯ ಸಂಗ್ರಹಿಸಿದರು. ಈ ಸಮಯದಲ್ಲಿ ಹೆಸ್ಕಾಂ ವಿರುದ್ಧ ಏಳು ಜಿಲ್ಲೆಗಳಿಂದ ಬಂದಿದ್ದ ಅನೇಕರು ಆಕ್ರೋಶ ವ್ಯಕ್ತಪಡಿಸಿದರು. ಒಂದಡೆ ಹೆಸ್ಕಾಂ ಬೇಕಾಬಿಟ್ಟಿ ವೆಚ್ಚಗಳನ್ನು ಮಾಡುತ್ತಿದೆ. ಕಾಮಗಾರಿಗಳಲ್ಲಿ ಹಗರಣಗಳನ್ನು ಮಾಡುತ್ತಿದೆ. ಬರಬೇಕಾದ ಬಿಲ್‌ನ್ನು ಸರಿಯಾಗಿ ವಸೂಲಿ ಮಾಡುತ್ತಿಲ್ಲ. ಅಧಿಕಾರಿಗಳು ತಾವು ಪ್ರಮಾಣಿಕವಾಗಿ ಮಾಡಬೇಕಾದ ಕೆಲಸವನ್ನು ಮಾಡದೇ, ಸಂಸ್ಥೆಗೆ ನಷ್ಟವನ್ನುಂಟು ಮಾಡುತ್ತಿದ್ದು, ಅದರ ಹೊರೆಯನ್ನು ಗ್ರಾಹಕರ ಮೇಲೆ ಹಾಕಬಾರದು ಅಂತ ಅರವಿಂದ್ ಪೈ ಎನ್ನುವವರು ಆಗ್ರಹಿಸಿದರು.

ಸಭೆಯಲ್ಲಿ ಹೆಸ್ಕಾಂನ ಅನೇಕ ಹಗರಣಗಳು, ಅಕ್ರಮ ಕೆಲಸಗಳನ್ನು ವಿವಿಧ ಜಿಲ್ಲೆಯಿಂದ ಬಂದಿದ್ದ ಗ್ರಾಹಕರು ಆಯೋಗದ ಅಧ್ಯಕ್ಷರಿಗೆ ಮಾಹಿತಿ ನೀಡಿದರು. ಮತ್ತೊಂದಡೆ ಸರಿಯಾಗಿ ವಿದ್ಯುತ್ ಸೌಲಭ್ಯಗಳನ್ನು ಕಲ್ಪಿಸದೇ ಇರೋದಕ್ಕೆ ಕೂಡ ಆಕ್ರೋಶ ವ್ಯಕ್ತಪಡಿಸಿದರು. ಬಿಲ್ ಪಡೆಯುವ ಹೆಸ್ಕಾಂ, ಸೇವೆಯನ್ನು ಮಾತ್ರ ಸರಿಯಾಗಿ ನೀಡುತ್ತಿಲ್ಲ ಅಂತ ಹರಿಹಾಯ್ದರು. ರೈತರ ಪಂಪಸೆಟ್‌ಗಳಿಗೆ ಸರಿಯಾಗಿ ವಿದ್ಯುತ್ ಪೂರೈಕೆ ಮಾಡದೇ ಇರೋದು, ಟ್ರಾನ್ಸಫಾರ್ಮ್‌ಗಳು ಸುಟ್ಟಾಗ ಅವುಗಳನ್ನು ಬೇಗನೆ ರಿಪೇರಿ ಮಾಡದೇ ನೀಡದೇ ಇರೋದು ಸೇರಿದಂತೆ ಅನೇಕ ದೂರುಗಳನ್ನು ರೈತರು ಮತ್ತು ಸಾರ್ವಜನಿಕರು ಆಯೋಗದ ಮುಂದೆ ಪ್ರಸ್ತಾಪಿಸಿದರು.

**ವಿದ್ಯುತ್ ಬಿಲ್ ಹೆಚ್ಚಳಕ್ಕೆ ಮಾಡುತ್ತಿರುವ ಸಭೆ ಅಲ್ಲ: ಅಧ್ಯಕ್ಷ ಪಿ ರವಿಕುಮಾರ್:**ಇನ್ನು ಹೆಸ್ಕಾಂ ಹೊರೆಯನ್ನು ಯಾವುದೇ ಕಾರಣಕ್ಕೂ ಗ್ರಾಹಕರ ಮೇಲೆ ಹಾಕಬಾರದು ಅಂತ ಸಭೆಯಲ್ಲಿ ಭಾಗಿಯಾಗಿದ್ದವರು ಆಗ್ರಹಿಸಿದರು. ಈ ಬಗ್ಗೆ ಮಾತನಾಡಿದ ಆಯೋಗದ ಅಧ್ಯಕ್ಷ ಪಿ ರವಿಕುಮಾರ್, ಇಂದಿನ ಸಭೆ ವಿದ್ಯುತ್ ಬಿಲ್ ಹೆಚ್ಚಳಕ್ಕೆ ಮಾಡುತ್ತಿರುವ ಸಭೆ ಅಲ್ಲ. ಈಗಾಗಲೇ ಕಳೆದ ವರ್ಷ ಬೆಲೆ ಹೆಚ್ಚಳ ಮಾಡಿರೋದರಿಂದ ಮತ್ತೆ ವಿದ್ಯುತ್ ಬಿಲ್ ಹೆಚ್ಚಳ ಮಾಡಲ್ಲ. ಆದರೆ ಹೆಸ್ಕಾಂ ಆರ್ಥಿಕ ನಷ್ಟವನ್ನು ಸರಿದೂಗಿಸಲು ಆಯೋಗಕ್ಕೆ ಮನವಿ ಮಾಡಿದೆ. ಈ ಬಗ್ಗೆ ಸಾರ್ವಜನಿಕರ ವಿಚಾರಗಳನ್ನು ಆಲಿಸಿ ಸರ್ಕಾರಕ್ಕೆ ವರದಿ ನೀಡುತ್ತೇವೆ ಎಂದು ಹೇಳಿದರು.

ಒಂದೆಡೆ ಹೆಸ್ಕಾಂಗೆ ಆದಾಯ ಬರುತ್ತಿದ್ದರೂ ಬರುತ್ತಿರುವ ಆದಾಯದಲ್ಲಿ ದೊಡ್ಡ ಮಟ್ಟದಲ್ಲಿ ಸೋರಿಕೆ ಆಗುತ್ತಿದೆ. ಜೊತೆಗೆ ಅನೇಕ ಹಗರಣಗಳು ಹೆಸ್ಕಾಂ ಆರ್ಥಿಕ ಸ್ಥಿತಿಯನ್ನು ಹಾಳು ಮಾಡುತ್ತಿವೆ. ಹೀಗಾಗಿ ಅಧಿಕಾರದಲ್ಲಿರುವವರು ಹೆಸ್ಕಾಂನಲ್ಲಿ ಆಗುತ್ತಿರುವ ಅವ್ಯವಹಾರ, ಅಕ್ರಮಗಳನ್ನು ತಡೆದರೆ ಸಂಸ್ಥೆ ನಷ್ಟದಿಂದ ಲಾಭದ ಹಳಿಗೆ ಬರುತ್ತದೆ. ಈ ನಿಟ್ಟಿನಲ್ಲಿ ಹೆಸ್ಕಾಂ ಮತ್ತು ಇಂದನ ಇಲಾಖೆ ಚಿಂತಿಸಬೇಕಿದೆ.

ಸುದ್ದಿ ಹಾಗೂ ಜಾಹೀರಾತುಗಳಿಗೆ
ಸಂಪರ್ಕಿಸಿ:9538786812/8217606793

## ನಕಲಿ ಪ್ರಶ್ನೆಪತ್ರಿಕೆ ಹಾವಳಿ: ವಿದ್ಯಾರ್ಥಿಗಳೇ ನಂಬಿ ಮೋಸ ಹೋಗದಿರಿ ಎಂದ ಕೆಎಸ್‌ಈಆಬಿ




**ಬೆಂಗಳೂರು:** 2026ನೇ ಸಾಲಿನ ದ್ವಿತೀಯ ಪಿಯುಸಿ ಪರೀಕ್ಷೆಗಳು ಸಮೀಪಿಸುತ್ತಿರುವ ಹಿನ್ನೆಲೆಯಲ್ಲಿ ಸಾಮಾಜಿಕ ಜಾಲತಾಣಗಳಲ್ಲಿ ನಕಲಿ ಪ್ರಶ್ನೆಪತ್ರಿಕೆಗಳು ಹರಿದಾಡುತ್ತಿರುವ ಆರೋಪ ಕೇಳಿಬಂದಿದೆ. ಪರೀಕ್ಷೆಗಳ ಕೌಂಟ್‌ಡೌನ್ ನಡುವೆ ಈ ರೀತಿಯ ಸಂದೇಶಗಳು ವಿದ್ಯಾರ್ಥಿಗಳಲ್ಲಿ ಗೊಂದಲ ಮತ್ತು ಆತಂಕ ಉಂಟುಮಾಡಿರುವುದಾಗಿ ವರದಿಯಾಗಿದೆ.

ಈ ಕುರಿತು ಪ್ರತಿಕ್ರಿಯಿಸಿದ ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಳಿ ಅಧ್ಯಕ್ಷ ಪ್ರಕಾಶ್ ನಿಟ್ಟಾಲಿ, ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡುತ್ತಿರುವ ಪ್ರಶ್ನೆಪತ್ರಿಕೆಗಳು ಸಂಪೂರ್ಣ ನಕಲಿ ಎಂದು ಸ್ಪಷ್ಟಪಡಿಸಿದ್ದಾರೆ. ವಿದ್ಯಾರ್ಥಿಗಳು ಮತ್ತು ಪೋಷಕರು ಇಂತಹ ವದಂತಿಗಳಿಗೆ ಮರುಳಾಗಬಾರದು ಎಂದು ಅವರು ಮನವಿ ಮಾಡಿದ್ದು, ಈ ರೀತಿಯ ನಕಲಿ ಪ್ರಶ್ನೆಪತ್ರಿಕೆಗಳನ್ನು ಹರಡುವವರನ್ನು ಪತ್ತೆಹಚ್ಚಲು ಸೈಬರ್ ಪೊಲೀಸರಿಗೆ ದೂರು ನೀಡಲಾಗಿದೆ ಎಂದು ತಿಳಿಸಿದ್ದಾರೆ.

ಕರ್ನಾಟಕ ಬೋರ್ಡ್ ಎಸ್‌ಎಸ್‌ಎಲ್‌ಸಿ ಪರೀಕ್ಷೆಗಳು ಮಾರ್ಚ್ 18ರಿಂದ ಆರಂಭವಾಗಲಿದ್ದು, ದ್ವಿತೀಯ ಪಿಯುಸಿ ಪರೀಕ್ಷೆಗಳು ಫೆಬ್ರವರಿ 28ರಿಂದ ಪ್ರಾರಂಭವಾಗಲಿವೆ. ಪರೀಕ್ಷೆಗಳು ಹತ್ತಿರವಾಗುತ್ತಿರುವ ಹಿನ್ನೆಲೆ ನಕಲಿ ಪ್ರಶ್ನೆಪತ್ರಿಕೆಗಳ ಹರಿದಾಟದ ಆರೋಪಗಳು ಗಂಭೀರವಾಗಿ ಪರಿಗಣಿಸಲ್ಪಟ್ಟಿವೆ. ಇದರ ಹಿನ್ನೆಲೆಯಲ್ಲಿ ಎಸ್‌ಎಸ್‌ಎಲ್‌ಸಿ ಹಾಗೂ ಪಿಯುಸಿ ಪರೀಕ್ಷೆಗಳ ಅವಧಿಯಲ್ಲಿ ಸಾಮಾಜಿಕ ಜಾಲತಾಣಗಳ ಮೇಲಿನ ನಿಗಾವನ್ನು ಕಠಿಣಗೊಳಿಸುವುದಾಗಿ ರಾಜ್ಯ ಸರ್ಕಾರ ಘೋಷಿಸಿದೆ.

ಪೂರ್ವಭಾವಿ ಪರೀಕ್ಷೆಗಳ ಸಂದರ್ಭ ದಲ್ಲಿಯೂ ಇದೇ ರೀತಿಯ ನಕಲಿ ಪ್ರಶ್ನೆಪತ್ರಿಕೆಗಳ ಹರಡುವಿಕೆ ನಡೆದಿದ್ದರಿಂದ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಮುಖ್ಯ ಪರೀಕ್ಷೆಗಳ ವೇಳೆಯಲ್ಲಿ ಹೆಚ್ಚುವರಿ ಎಚ್ಚರಿಕೆ ಕ್ರಮಗಳನ್ನು ಕೈಗೊಳ್ಳಲು ತೀರ್ಮಾನಿಸಿದೆ. ವಿಶೇಷವಾಗಿ ವಾಟ್ಸಪ್, ಟೆಲಿಗ್ರಾಂ ಹಾಗೂ ಇತರೆ ಸಾಮಾಜಿಕ ಜಾಲತಾಣಗಳ ಮೂಲಕ ಹರಡುವ ವದಂತಿಗಳನ್ನು ತಡೆಯಲು ತಾಂತ್ರಿಕ ನಿಗಾವನ್ನು ಹೆಚ್ಚಿಸಲಾಗುತ್ತಿದೆ.

ಈ ಸಂಬಂಧ ಶಿಕ್ಷಣ ಸಚಿವ ಮಧು ಬಂಗಾರಪ್ಪ ಈಗಾಗಲೇ ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಪೊಲೀಸ್ ಅಧೀಕ್ಷಕರು ಮತ್ತು ಹಿರಿಯ ಪೊಲೀಸ್ ಅಧಿಕಾರಿಗಳೊಂದಿಗೆ ಉನ್ನತ ಮಟ್ಟದ ಪರಿಶೀಲನಾ ಸಭೆ ನಡೆಸಿದ್ದಾರೆ. ಪರೀಕ್ಷಾ ಪ್ರಕ್ರಿಯೆ ಪಾರದರ್ಶಕವಾಗಿ ಮತ್ತು ಸುಗಮವಾಗಿ ನಡೆಯುವಂತೆ ನೋಡಿಕೊಳ್ಳುವ ಜೊತೆಗೆ ಪ್ರಶ್ನೆಪತ್ರಿಕೆ ಸೋರಿಕೆ ಅಥವಾ ನಕಲಿ ಪ್ರಶ್ನೆಪತ್ರಿಕೆ ಹರಡುವಿಕೆ ತಡೆಯಲು ಕಟ್ಟುನಿಟ್ಟಿನ ಕ್ರಮಗಳನ್ನು ಕೈಗೊಳ್ಳುವಂತೆ ಅಧಿಕಾರಿಗಳಿಗೆ ಸೂಚಿಸಲಾಗಿದೆ.

ಈ ವರ್ಷ ದ್ವಿತೀಯ ಪಿಯುಸಿ ಪರೀಕ್ಷೆಗೆ ರಾಜ್ಯದ 5,174 ಪಿಯು ಕಾಲೇಜುಗಳಿಂದ ಒಟ್ಟು 7,10,363 ವಿದ್ಯಾರ್ಥಿಗಳು ನೋಂದಾಯಿಸಿಕೊಂಡಿದ್ದಾರೆ. ಇವರಲ್ಲಿ 2,92,645 ಮಂದಿ ವಿಜ್ಞಾನ ವಿಭಾಗದವರು, 2,11,174 ಮಂದಿ ವಾಣಿಜ್ಯ ವಿಭಾಗದವರು ಹಾಗೂ 1,42,982 ಮಂದಿ ಕಲಾ ವಿಭಾಗದ ವಿದ್ಯಾರ್ಥಿಗಳಿದ್ದಾರೆ. ರಾಜ್ಯದಾದ್ಯಂತ 1,217 ಪರೀಕ್ಷಾ ಕೇಂದ್ರಗಳಲ್ಲಿ ಪಿಯುಸಿ ಪರೀಕ್ಷೆಗಳು ನಡೆಯಲಿವೆ.

ಅದೇ ವೇಳೆ ಎಸ್‌ಎಸ್‌ಎಲ್‌ಸಿ ಪರೀಕ್ಷೆಗಳು 2,871 ಕೇಂದ್ರಗಳಲ್ಲಿ ನಡೆಯಲಿದ್ದು, 15,941 ಶಾಲೆಗಳಿಂದ ದಾಖಲೆ ಪ್ರಮಾಣದ 9,02,889 ವಿದ್ಯಾರ್ಥಿಗಳು ಈ ವರ್ಷ ಪರೀಕ್ಷೆಗೆ ಹಾಜರಾಗಲಿದ್ದಾರೆ ಎಂದು ವರದಿಗಳು ತಿಳಿಸಿವೆ. ಪರೀಕ್ಷೆಗಳ ಶಿಸ್ತು ಮತ್ತು ಭದ್ರತೆ ಕಾಪಾಡಲು ಅಗತ್ಯ ಮುನ್ನೆಚ್ಚರಿಕಾ ಕ್ರಮಗಳನ್ನು ಸರ್ಕಾರ ಹಾಗೂ ಶಿಕ್ಷಣ ಇಲಾಖೆ ಕೈಗೊಂಡಿದ್ದು, ವಿದ್ಯಾರ್ಥಿಗಳು ಆತಂಕವಿಲ್ಲದೆ ಪರೀಕ್ಷೆಗೆ ಸಿದ್ಧರಾಗುವಂತೆ ಮನವಿ ಮಾಡಲಾಗಿದೆ.

RAJARATHA CYBER
All Online Services Under One Roof!
• Aadhaar, PAN Card, Voter ID, Ration Card
• e-Khata, Senior Citizen Card
& Other Government Services
• Address: Junior College Road, Nelamangala
Contact: 9886926812 for medicts

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203, Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.




Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203, Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.